**<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಜೇವರ್ಗಿ.</u>**

**<u>ಸಿ ಸಿ ನಂ.439/2024</u>**

**<u>ಫಿರ್ಯಾದಿದಾರರು :-</u>** ನೆಲೋಗಿ ಪೊಲೀಸ್ ಠಾಣೆ

**: ವಿರುದ್ದ :**

**<u>ಆರೋಪಿತರು:</u>**

ವಿನೋದ ತಂದೆ ಅವದೂತ ಗೊಪಣೆ
ವಃ 28 ವರ್ಷ, ಉಃ ಚಾಲಕ ಮತ್ತು ಒಕ್ಕಲುತನ,
ಸಾಃ ಇಟಗಾ, ತಾಃ ಜೇವರ್ಗಿ, ಜಿಃ ಕಲಬುರ್ಗಿ,

**<u>ದೋಷಾರೋಪಣೆ</u>**

**ಶ್ರೀ ಕಾಶಿನಾಥ ವಿ. ಉಪ್ಪಾರ್, ಬಿ.ಎಸ್.ಸಿ. ಎಲ್‌ಎಲ್.ಬಿ.,** ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಜೇವರ್ಗಿ, ಆದ ನಾನು, ಆರೋಪಿತರಾದ ನಿಮ್ಮ ವಿರುದ್ದ ಈ ಕೆಳಕಾಣಿಸಿದ ಅಪಾದನೆಗಳನ್ನು ರೂಪಿಸಿರುತ್ತೆನೆ.

ಆರೋಪಿತರಾದ ನೀವು ದಿನಾಂಕ 08-03-2024 ರಂದು ಸಂಜೆ 7-30 ನೆಲೋಗಿ ಪೊಲೀಸ ಠಾಣೆ ವ್ಯಾಪ್ತಿಯಲ್ಲಿ ಬರುವ ಇಟಗಾ ಗ್ರಾಮದ ಹತ್ತಿರ, ಭೀಮಾ ನದಿಯಲ್ಲಿ ಆರೋಪಿತನು ಯಾವುದೇ ಪರವಾನಿಗೆ ಇಲ್ಲದೆ ಸರಕಾರಕ್ಕೆ ಮೊಸ ಮಾಡುವ ಉದ್ದೇಶದಿಂದ ಕಳ್ಳತನದಿಂದ ತನ್ನ ಸ್ವರಾಜ ಕಂಪನಿಯ ಟ್ರ್ಯಾಕ್ಟರ ನಂ.ಕೆಎ-32/ಟಿಬಿ-2303 ಟ್ರಾಲಿ ನಂ.ಕೆಎ-32/ಟಿಬಿ-2304 ನೆದ್ದರಲ್ಲಿ ಮರಳನ್ನು ಸಾಗಾಣಿಕೆ ಮಾಡಿರುತ್ತಿರಿ, ಆದ್ದರಿಂದ ನೀವು ಭಾ. ದಂ. ಸಂ. ಕಲಂ 379 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುತ್ತಿರಿ, ಅದು ನನ್ನ ಸಂಜ್ಞೆಯ ಅಡಿಯಲ್ಲಿ ಬರುತ್ತದೆ.

ನೀವು ಮೇಲೆ ಹೇಳಿದ ಅಪಾದನೆಗೆ ಈ ನ್ಯಾಯಾಲಯದ ಮುಂದೆ ನೀವು ವಿಚಾರಣೆ ಎದುರಿಸಬೇಕೆಂದು ಆದೇಶಿಸುತ್ತೇನೆ.

ದಿನಾಂಕ 10-07-2025

ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಜೇವರ್ಗಿ.

**ಆರೋಪಿಗಳ ಹೇಳಿಕೆ**

ಪ್ರಶ್ನೆ-1: ಈಗ ನಿಮಗೆ ತಿಳಿದ ಭಾಷೆಯಲ್ಲಿ ಓದಿ ಹೇಳಿದ ಆರೋಪಣೆಯನ್ನು ಅರ್ಥಮಾಡಿಕೊಂಡಿದಿರಾ?

ಉ : ಆ-

ಪ್ರಶ್ನೆ -2 : ಆರೋಪಣೆಯನ್ನು ಒಪ್ಪುವಿರಾ ಅಥವಾ ವಿಚಾರಣೆ ನಡೆಸಬೇಕೆ?

ಉ : ಆ-

(ಈ ಮೂಲಕ ದೃಢೀಕರಿಸುವುದೇನೆಂದರೆ ಮೇಲೆ ಕೊಟ್ಟಂತಹ ಹೇಳಿಕೆಗಳು ಆರೋಪಿತರ ನಿಜವಾದ ಹೇಳಿಕೆಗಳಿರುತ್ತವೆಂದು ಪ್ರಮಾಣಿಕರಿಸಲಾಗಿದೆ)

ದಿನಾಂಕ 10-07-2025

ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಜೇವರ್ಗಿ.